## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳ ವೇತನ ಪರಿಷ್ಕರಣೆಯ ಬಗ್ಗೆ.

**ಉಲ್ಲೇಖ:-** 1) ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ನೇತೃತ್ವದ ಸಮಿತಿಯ ವರದಿ.
2) ಸರ್ಕಾರದ ಆದೇಶ ಸಂಖ್ಯೆ:ಇಡಿ 264 ಎಸ್ಎಲ್‌ಬಿ 2012 ದಿನಾಂಕ:09-05-2012.

* * *

**ಪ್ರಸ್ತಾವನೆ:**

ರಾಜ್ಯದಲ್ಲಿನ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳು ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನ್ವಯ ವೇತನ ಪರಿಷ್ಕರಣೆ ಮತ್ತು ಇತರೆ ಆರ್ಥಿಕ ಸೌಲಭ್ಯಗಳನ್ನು ಅನುಷ್ಠಾನಗೊಳಿಸುವಂತೆ ಕೋರುತ್ತಿದ್ದಾರೆ. ಈ ವರದಿಯನ್ನು ಅಧಿಕಾರಿ ವೇತನ ಸಮಿತಿಯು 2011ರಲ್ಲಿ ಪರಿಗಣಿಸಿದ್ದು, ವರದಿಯಲ್ಲಿನ ಶಿಫಾರಸ್ಸುಗಳನ್ನು ಅಧಿಕಾರಿ ವೇತನ ಸಮಿತಿಯು ಒಪ್ಪಿಕೊಂಡಿರುವುದಿಲ್ಲ.

ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು ಹಾಗೂ ಉಪನ್ಯಾಸಕರಿಗೆ ಹೆಚ್ಚಿನ ವೇತನ ಶ್ರೇಣಿಯ ಬೇಡಿಕೆಯನ್ನು ಪರಿಗಣಿಸುವಂತೆ ಅಧಿಕಾರಿ ವೇತನ ಸಮಿತಿಗೆ ನಿರ್ದಿಷ್ಟ ಸೂಚನೆಯನ್ನು ನೀಡಲಾಗಿತ್ತು. ಈ ಕುರಿತಂತೆ ಅಧಿಕಾರಿ ವೇತನ ಸಮಿತಿಯು ಅದರ ವರದಿಯ ಕಂಡಿಕೆ 8.2.7ರಲ್ಲಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತದೆ.

> 8.2.7 ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ವಿಶೇಷ ಭತ್ಯೆ. "ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಿಗೆ ಹೆಚ್ಚಿನ ವೇತನ ಶ್ರೇಣಿ ನೀಡಿಕೆಯನ್ನು ಪರಿಗಣಿಸಲು ಸರ್ಕಾರದಿಂದ ವಿಶೇಷ ಸೂಚನೆಯನ್ನು ನೀಡಲಾಗಿತ್ತು. ಈ ವಿಷಯವನ್ನು ಸಮಿತಿಯು ವಿವರವಾಗಿ ಪರಿಶೀಲಿಸಿದೆ. 11 ಮತ್ತು 12 ನೆಯ ತರಗತಿಗಳನ್ನು ಸೆಕೆಂಡರಿ ಶಿಕ್ಷಣ ವ್ಯವಸ್ಥೆಯ ವ್ಯಾಪ್ತಿಯಲ್ಲಿ ತರಬೇಕೆಂಬ ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ವ್ಯವಸ್ಥೆಯ ಪುನರ್‌ರಚನೆಯ ಪ್ರಕ್ರಿಯೆಯು ಪೂರ್ಣವಾದ ನಂತರ ಪ್ರತ್ಯೇಕ ವೇತನ ಶ್ರೇಣಿ ನೀಡಿಕೆಯ ಬಗ್ಗೆ ಪರಿಗಣಿಸಬಹುದಾಗಿದೆ. ಸದ್ಯಕ್ಕೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಮಾಸಿಕ ರೂ.500/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಸಮಿತಿಯು ಶಿಫಾರಸ್ಸು ಮಾಡುತ್ತದೆ. ಕೆಲವು ಉಪನ್ಯಾಸಕರಿಗೆ ಈಗ ನೀಡುತ್ತಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯ ಬದಲಾಗಿ ಈ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆ"

ಮೇಲ್ಕಂಡ ಶಿಫಾರಸ್ಸಿನನ್ವಯ ಮೇಲೆ(2)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ:09-05-2012ರಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರುಗಳಿಗೆ ನೀಡಲಾಗುತ್ತಿರುವ ವಿಶೇಷ ವೇತನ ಭತ್ಯೆ ರೂ.200/-ಗಳನ್ನು ರೂ.500/-ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರುಗಳಿಗೆ ರೂ.500/-ಗಳ ವಿಶೇಷ ವೇತನವನ್ನು ಮಂಜೂರು ಮಾಡಿದ್ದರೂ ಸಹ ಇತರ ಬೇಡಿಕೆಗಳನ್ನು ಪರಿಗಣಿಸುವಂತೆ ಸತತವಾಗಿ ಕೋರಿಕೆ ಸಲ್ಲಿಸುತ್ತಿದ್ದಾರೆ. ತಮ್ಮ ಬೇಡಿಕೆಯನ್ನು ಪರಿಗಣಿಸಲು ಒತ್ತಾಯಿಸಿ, 2016ರಲ್ಲಿ ಕಳೆದ 15 ದಿನಗಳಿಂದ ಮೌಲ್ಯಮಾಪನ ಕಾರ್ಯವನ್ನು ಬಹಿಷ್ಕರಿಸಿರುತ್ತಾರೆ.

ಈ ಕುರಿತು ಸರ್ಕಾರದ ಮಟ್ಟದಲ್ಲಿ ವಿವಿಧ ಹಂತಗಳಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ಅಂತಿಮವಾಗಿ ದಿನಾಂಕ:13-04-2016ರಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆಸಿದ ಉನ್ನತ ಮಟ್ಟದ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಿ, ಈ ಕೆಳಕಂಡಂತೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಯಿತು.

1. ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು / ಉಪನ್ಯಾಸಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು;
2. ಉಪನ್ಯಾಸಕರುಗಳಿಗೆ ಪ್ರಸ್ತುತ ನೀಡುತ್ತಿರುವ ವಿಶೇಷ ಭತ್ಯೆಯನ್ನು ಮುಂದುವರೆಸುವುದು;

ಪ್ರಸ್ತುತ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರು ಮತ್ತು 20 ವರ್ಷ ಸೇವೆ ಸಲ್ಲಿಸಿರುವ ಉಪನ್ಯಾಸಕರು ಒಂದೇ ವೇತನ ಶ್ರೇಣಿಯನ್ನು ಅಂದರೆ ರೂ.30400-51300ನ್ನು ಪಡೆಯುತ್ತಿದ್ದಾರೆ. ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಬಹಳ ಕಾಲದಿಂದ ಹೆಚ್ಚುವರಿ ವೇತನ ಶ್ರೇಣಿಯನ್ನು ಮತ್ತು ವಿಶೇಷ ಭತ್ಯೆಯನ್ನು ನೀಡಲು ಕೋರುತ್ತಿದ್ದಾರೆ.

ದಿನಾಂಕ:01.08.2008ರಂದು ಅಥವಾ ನಂತರ ನೇಮಕಾತಿ ಹೊಂದಿದ ಉಪನ್ಯಾಸಕರುಗಳಿಗೆ ರೂ.500/-ಗಳ ವಿಶೇಷ ಭತ್ಯೆಯ ಸೌಲಭ್ಯವನ್ನು ವಿಸ್ತರಿಸಲು ಕೋರಿರುವ ಬಗ್ಗೆ ಪ್ರಸಕ್ತ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಪದವಿ ಪೂರ್ವ ಪ್ರಾಂಶುಪಾಲರು/ಉಪನ್ಯಾಸಕರು ಸಂಘದ ಬೇಡಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ 87 ಡಿಜಿಡಿ 2016, ಬೆಂಗಳೂರು, ದಿನಾಂಕ: 15.04.2016</u>**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರು/ಉಪನ್ಯಾಸಕರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ.

1. ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು / ಉಪನ್ಯಾಸಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.
2. ಪ್ರಸ್ತುತ ರೂ.500/-ಗಳ ವಿಶೇಷ ಭತ್ಯೆಯನ್ನು ಪಡೆಯುತ್ತಿರುವ ಉಪನ್ಯಾಸಕರುಗಳಿಗೆ ಸದರಿ ವಿಶೇಷ ಭತ್ಯೆಯನ್ನು ಮುಂದುವರೆಸಲಾಗಿದೆ.

3. ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಾಂಶುಪಾಲರಿಗೆ ಮಾಸಿಕ ರೂ.1000/-ಗಳ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆ.
4. ಮೇಲಿನ ಸೌಲಭ್ಯಗಳು ದಿನಾಂಕ:01.06.2016ರಿಂದ ಅಂದರೆ, 2016ರ ಜೂನ್ ತಿಂಗಳ ವೇತನದಿಂದ ಜಾರಿಗೆ ಬರುತ್ತದೆ.
5. ತಮ್ಮ ವೇತನ ಶ್ರೇಣಿಯ ಅಂತಿಮ ಹಂತವನ್ನು ತಲುಪಿರುವ ಪ್ರಾಂಶುಪಾಲರು/ ಉಪನ್ಯಾಸಕರುಗಳು ಮೇಲಿನಂತೆ ಮಂಜೂರು ಮಾಡಲಾಗಿರುವ ಒಂದು ಹೆಚ್ಚುವರಿ ವೇತನ ಬಡ್ತಿ ಸೌಲಭ್ಯವನ್ನು ಪಡೆಯಲು ಅರ್ಹರಾಗಿರುತ್ತಾರೆ.
6. ಮೇಲಿನ ಸೌಲಭ್ಯಗಳನ್ನು ಪದವಿ ಪೂರ್ವ ಶಿಕ್ಷಣ ಕಾಲೇಜುಗಳ ಅನುದಾನಕ್ಕೆ ಒಳಪಟ್ಟಿರುವ ಪ್ರಾಂಶುಪಾಲರು ಮತ್ತು ಉಪನ್ಯಾಸಕರುಗಳಿಗೂ ಸಹ ವಿಸ್ತರಿಸಲಾಗಿದೆ.
7. ಆರ್ಥಿಕ ಹೊರೆಯನ್ನು ಒಳಗೊಂಡಿರದ ಸಂಘದ ಇತರ ಬೇಡಿಕೆಗಳನ್ನು ಶಿಕ್ಷಣ ಇಲಾಖೆಯು ಪರಿಶೀಲಿಸಲಿದೆ.
8. ಆರ್ಥಿಕ ಹೊರೆಯನ್ನು ಒಳಗೊಂಡಿರುವ ಸಂಘದ ಬೇಡಿಕೆಗಳನ್ನು ಮುಂದಿನ ವೇತನ ಸಮಿತಿ/ವೇತನ ಆಯೋಗದ ಮುಂದೆ ಮಂಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

15/4/16

(ವಿ.ರಾಮಕೃಷ್ಣಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ).

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು- ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಸರಬರಾಜು ಮಾಡಲು.

ಪ್ರತಿ:

1) ಮಹಾಲೇಖಪಾಲರು(ಎ & ಇ), ಕರ್ನಾಟಕ, ಬೆಂಗಳೂರು-1.
2) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ), ವಿಧಾನ ಸೌಧ, ಬೆಂಗಳೂರು.
6) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು.

7) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ 18ನೇ ಕ್ರಾಸ್, ಬೆಂಗಳೂರು.
8) ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ.
9) ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘ(ರಿ), ಬೆಂಗಳೂರು.
10) ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ(ರಿ), ಬೆಂಗಳೂರು.
11) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.